ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: [illegible] ಮೀಸಲಾತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯ ವಾಣಿ ದಿನಾಂಕ : DATE : 10/2/2020

# ಮೀಸಲಾತಿ: ಕೇಂದ್ರ ಮಧ್ಯಪ್ರವೇಶಿಸಲಿ

ಉದಯ 10/2/20

**ಬೆಂಗಳೂರು:** ಎಸ್ಸಿ ಎಸ್ಟಿ ವರ್ಗಗಳಿಗೆ ನೇಮಕಾತಿ ಹಾಗೂ ಬಡ್ತಿಯಲ್ಲಿ ಮೀಸಲಾತಿ ನೀಡುವುದು ರಾಜ್ಯ ಸರ್ಕಾರಗಳ ವಿವೇಚನೆಗೆ ಬಿಟ್ಟಿದ್ದು, ಮೀಸಲಾತಿ ಮೂಲಭೂತ ಹಕ್ಕು ಅಲ್ಲ ಎಂಬ ಸುಪ್ರೀಂ ತೀರ್ಪು ಸರಿಯಲ್ಲ ಎಂದಿರುವ ಕಾಂಗ್ರೆಸ್ ಹಿರಿಯ ನಾಯಕ ಮಲ್ಲಿಕಾರ್ಜುನ ಖರ್ಗೆ ಈ ವಿಚಾರದಲ್ಲಿ ಕೇಂದ್ರ ಸರ್ಕಾರ ತಕ್ಷಣ ಮಧ್ಯಪ್ರವೇಶ ಮಾಡಬೇಕು ಎಂದು ಆಗ್ರಹಿಸಿದ್ದಾರೆ. ಕೆಪಿಸಿಸಿ ಕಚೇರಿಯಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕಳೆದ ಎಪ್ಪತ್ತು ವರ್ಷಗಳಿಂದ ಅನುಸರಿಸಿಕೊಂಡ ಬರಲಾದ ಮೀಸಲಾತಿ ವ್ಯವಸ್ಥೆಗೆ ಸುಪ್ರೀಂಕೋರ್ಟ್ ತೀರ್ಪು ಕೊಡಲಿ ಪೆಟ್ಟು ಕೊಟ್ಟಿದೆ. ಇಂತಹ ತೀರ್ಪು ದೇಶವನ್ನು ತಪ್ಪು ದಾರಿಗೆ ಎಳೆದುಕೊಂಡು ಹೋಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು. ▶ ವಿವರ: 7

# ಕೇಂದ್ರದ ಮಧ್ಯಪ್ರವೇಶಕ್ಕೆ ಆಗ್ರಹ

ಉದಯ 10/2/20

**ಬೆಂಗಳೂರು:** ಎಸ್ಸಿ ಎಸ್ಟಿ ವರ್ಗಗಳಿಗೆ ನೇಮಕಾತಿ ಹಾಗೂ ಬಡ್ತಿಯಲ್ಲಿ ಮೀಸಲಾತಿ ನೀಡುವುದು ರಾಜ್ಯ ಸರ್ಕಾರಗಳ ವಿವೇಚನೆಗೆ ಬಿಟ್ಟಿದ್ದು ಮೀಸಲಾತಿ ಮೂಲಭೂತ ಹಕ್ಕು ಅಲ್ಲ ಎಂಬ ಸುಪ್ರೀಂಕೋರ್ಟ್ ತೀರ್ಪನ್ನು ಖಂಡಿಸಿರುವ ಕಾಂಗ್ರೆಸ್ ಹಿರಿಯ ನಾಯಕ ಮಲ್ಲಿಕಾರ್ಜುನ ಖರ್ಗೆ ಈ ವಿಚಾರದಲ್ಲಿ ಕೇಂದ್ರ ಸರ್ಕಾರ ತಕ್ಷಣ ಮಧ್ಯಪ್ರವೇಶ ಮಾಡಬೇಕು ಎಂದು ಆಗ್ರಹಿಸಿದ್ದಾರೆ.



ಕೆಪಿಸಿಸಿ ಕಚೇರಿಯಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕಳೆದ ಎಪ್ಪತ್ತು ವರ್ಷಗಳಿಂದ ಅನುಸರಿಸಿಕೊಂಡ ಬರಲಾದ ಮೀಸಲಾತಿ ವ್ಯವಸ್ಥೆಗೆ ಸುಪ್ರೀಂಕೋರ್ಟ್ ತೀರ್ಪು ಕೊಡಲಿ ಪೆಟ್ಟು ಕೊಟ್ಟಿದೆ. ಇಂತಹ ತೀರ್ಪು ದೇಶವನ್ನು ತಪ್ಪು ದಾರಿಗೆ ಎಳೆದುಕೊಂಡ ಹೋಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಮೀಸಲಾತಿ ಬಗ್ಗೆ ಸಂವಿಧಾನದ ಪರಿಚ್ಛೇದ 16 (4), 16 (4-ಎ)ಗಳಲ್ಲಿ ಬಹಳ ಸ್ಪಷ್ಟವಾಗಿ ಹೇಳಲಾಗಿದೆ. ಆದರೆ, ಇದನ್ನು ಸುಪ್ರೀಂಕೋರ್ಟ್ ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿ ವ್ಯಾಖ್ಯಾನಿಸಿದೆ. ಇದು ಸಾಂವಿಧಾನಿಕ ವಿಚಾರ ಆಗಿರುವುದರಿಂದ ತಕ್ಷಣ ಕೇಂದ್ರ ಸರ್ಕಾರ ಮಧ್ಯಪ್ರವೇಶಿಸಿ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಬೇಕು, ಇಲ್ಲದಿದ್ದರೆ ಈ ಗೊಂದಲದ ನಿವಾರಣೆಗೆ ಸಂವಿಧಾನದಲ್ಲಿ ತಿದ್ದುಪಡಿ ತರಬೇಕು. ಈ ಪ್ರಕರಣವನ್ನು ಸಾಂವಿಧಾನಿಕ ನ್ಯಾಯಪೀಠಕ್ಕೆ ವರ್ಗಾಯಿಸುವ ಅವಕಾಶವೂ ಇದೆ ಎನ್ನುವುದನ್ನು ಕೇಂದ್ರ ಸರ್ಕಾರ ಮನಗಾಣಬೇಕು ಎಂದು ಹೇಳಿದರು.

ಬಡ್ತಿ ಮೀಸಲಾತಿ ವಿಚಾರದಲ್ಲಿ ಉತ್ತಾರಖಂಡ ಸರ್ಕಾರ ತೆಗೆದುಕೊಂಡ ನಿಲುವು ಈ ಗೊಂದಲಕ್ಕೆ ಮುಖ್ಯ ಕಾರಣ. ಬಿಜೆಪಿ ಅಧಿಕಾರದಲ್ಲಿರುವ ರಾಜ್ಯಗಳಲ್ಲಿ ಮೀಸಲಾತಿ ವಿರುದ್ಧವಾಗಿ ನಿರ್ಣಯಗಳನ್ನು ಕೈಗೊಳ್ಳಲಾಗುತ್ತಿದೆ. ಸುಪ್ರೀಂ ಕೋರ್ಟ್ ತೀರ್ಪಿಗೆ ಕೇಂದ್ರ ಸರ್ಕಾರದ ಕುಮ್ಮಕ್ಕು ಕಾರಣ. ಮೀಸಲಾತಿಯನ್ನು ತೆಗೆದುಹಾಕುವ ಹುನ್ನಾರ ನಡೆಸುತ್ತಿದೆ. ಈ ವಿಚಾರದಲ್ಲಿ ಕಾಂಗ್ರೆಸ್ ಪಕ್ಷ ಪಾರ್ಲಿಮೆಂಟ್ ಒಳಗಡೆ ಹಾಗೂ ಹೊರಗಡೆ ದೇಶವ್ಯಾಪಿ ಹೋರಾಟ ನಡೆಸಲಿದೆ ಎಂದು ಖರ್ಗೆ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕೆಪಿಸಿಸಿ ಅಧ್ಯಕ್ಷ ದಿನೇಶ್ ಗುಂಡೂರಾವ್, ಮಾಜಿ ಸಂಸದ ಜಿ.ಎನ್. ಚಂದ್ರಪ್ಪ ಮತ್ತಿತರರು ಉಪಸ್ಥಿತರಿದ್ದರು.